# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164//2021–22

ದಿನಾಂಕ: 09–03–2022

## ವಾರ್ಡ್ ಸಮಿತಿ ಸಭೆಯ ನಡಾವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 09–03–2022 ಬುಧವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಮಾರ್ಚ್ ತಿಂಗಳ ಮೊದಲ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 3 | ಡಾ॥ ಹರ್ಷಿತ | ವೈದ್ಯಾಧಿಕಾರಿ (ವಿದ್ಯಾಪೀಠ ಆರೋಗ್ಯ ಕೇಂದ್ರ) |
| 4 | ಡಾ॥ ಸಾವಂತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 6 | ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಮುನಿರಾಜು | ಸಹಾಯಕ ಅಭಿಯಂತರರು ಡಬ್ಲ್ಯೂ–08 (ಬೆಸ್ಕಾಂ) |
| 8 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 9 | ಶ್ರೀ ಪ್ರಜ್ವಲ್ | ಮಾರ್ಷಲ್ |
| 10 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 11 | ಶ್ರೀ ತಿರುಮಲಯ್ಯ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 12 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 13 | ಶ್ರೀ ದುರ್ಗಾ ಪ್ರಸಾದ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 14 | ಶ್ರೀ ಕುಮಾರ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಫೆಬ್ರವರಿ–2022 ತಿಂಗಳ ಮೊದಲ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆಯು ಸಮರ್ಪಕವಾಗಿ ನಿರ್ವಹಿಸುತ್ತಿದ್ದು ಹಸಿ ಮತ್ತು ಒಣ ಕಸವನ್ನು ಮನೆಗಳಿಂದ ಸೂಕ್ತ ರೀತಿಯಲ್ಲಿ ಸಂಗ್ರಹಿಸಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ಹಾಜರಿದ್ದ ಘ.ತ್ಯಾನಿ ವಿಭಾಗದ ಸೂಪರ್‌ವೈಸರ್ ರವರು ವರದಿ ನೀಡಿರುತ್ತಾರೆ. ಬೇಸಿಗೆ ಕಾಲವಾದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಮರಗಳಿಂದ ಎಲೆಗಳು ಉದುರುತ್ತಿದ್ದು, ಉದುರಿದ ಎಲೆಗಳನ್ನು ಸಂಗ್ರಹಿಸಿ ವಿಲೇವಾರಿ ಮಾಡಲು ಎರಡು ಪಾಳಿಯಲ್ಲಿ ಕೆಲಸ ಮಾಡಲಾಗುತ್ತಿರುತ್ತದೆ ಎಂದು ಸಭೆಗೆ ಸೂಪರ್‌ವೈಸರ್ ರವರು ತಿಳಿಸಿರುತ್ತಾರೆ. ಇತ್ತೀಚಿನ ದಿನಗಳಲ್ಲಿ ಪೌರಕಾರ್ಮಿಕರ ಮುಷ್ಕರಗಳಿಂದ ತ್ಯಾಜ್ಯ ನಿರ್ವಹಣೆಯಲ್ಲಿ ಸ್ವಲ್ಪ ವ್ಯತ್ಯಾಸವಾಗಿದ್ದು, ನಂತರದ ದಿನಗಳಲ್ಲಿ ತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಫೆಬ್ರವರಿ-2022ರ ಮಾಹೆಯಲ್ಲಿ ಸರಿಸುಮಾರು 5000 ರಷ್ಟು ಲಸಿಕೆಯನ್ನು ಹಾಕಲಾಗುತ್ತಿದ್ದು, ಇದರಲ್ಲಿ 1ನೇ ಮತ್ತು 2ನೇ ಡೋಸ್, ಬೂಸ್ಟರ್ ಡೋಸ್ ಹಾಗೂ 15 ವರ್ಷದ ಮೇಲ್ಪಟ್ಟ ವಯಸ್ಕರಿಗೆ ನೀಡುತ್ತಿರುವ ಲಸಿಕೆಯು ಸೇರಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಫೆಬ್ರವರಿ-2022ರ ಮಾಹೆಯಲ್ಲಿ 3000 ಕೋವಿಡ್ ಪರೀಕ್ಷೆಯನ್ನು ನಡೆಸಲಾಗಿದ್ದು, ಅದರಲ್ಲಿ 300 ರಷ್ಟು ಕೋವಿಡ್ ಪಾಸಿಟಿವ್ ಕೇಸ್‌ಗಳು ವರದಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ ಹಾಗೂ ಯಾವುದೇ ಓಮಿಕ್ರೋನ್ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳು ತಿಳಿಸಿರುತ್ತಾರೆ. ಚಿಕ್ಕಮಕ್ಕಳ ಲಸಿಕಾ ಕಾರ್ಯವನ್ನು ವಾರದಲ್ಲಿ ಪ್ರತಿ ಮಂಗಳವಾರ ಮತ್ತು ಗುರುವಾರದಂದು ನೀಡಲಾಗುತ್ತಿರುತ್ತದೆ ಹಾಗೂ 15 ರಿಂದ 18 ವರ್ಷದ ಪ್ರಾಯದವರಿಗೆ ಕೋವಿಡ್ ಲಸಿಕೆಯನ್ನು ಆರೋಗ್ಯ ಕೇಂದ್ರದಲ್ಲಿ ಪ್ರತಿ ಶನಿವಾರ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ 13 ಶಾಲಾ-ಕಾಲೇಜುಗಳಲ್ಲಿ ಪ್ರತಿ ದಿನವೂ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

ವೈದ್ಯಾಧಿಕಾರಿಗಳು, ವಿದ್ಯಾಪೀಠ ಆರೋಗ್ಯ ಕೇಂದ್ರ ರವರು ಸಭೆಯಲ್ಲಿ ಹಾಜರಿದ್ದು, ಫೆಬ್ರವರಿ-2022ರ ಮಾಹೆಯಲ್ಲಿ ಸರಿಸುಮಾರು 2000 ದಷ್ಟು ಕೋವಿಡ್ ಲಸಿಕೆಯನ್ನು ಹಾಕಲಾಗಿದ್ದು, ಪ್ರತಿ ದಿನವೂ 100 ಜನರ ಕೋವಿಡ್ ಪರೀಕ್ಷೆಯನ್ನು ನಡೆಸಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ ಹಾಗೂ ಫೆಬ್ರವರಿ-2022ರ ಮಾಹೆಯಲ್ಲಿ 100 ಕೋವಿಡ್ ಪ್ರಕರಣಗಳು ವರದಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಆರೋಗ್ಯ ಕೇಂದ್ರದಲ್ಲಿ ಪ್ರತಿ ದಿನವೂ ಸಂಜೆ 4.00 ರಿಂದ 7.00 ರವರೆಗೆ ವಿವಿಧ ವಿಭಾಗದ ಪರಿಣಿತ ವೈದ್ಯರು ಆರೋಗ್ಯ ಕೇಂದ್ರಕ್ಕೆ ಬಂದು ಸಂಬಂಧಿತ ರೋಗಿಗಳ ತಪಾಸಣೆ ಮಾಡುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನವನ್ನು ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಫೆಬ್ರವರಿ ಮಾಹೆಯಲ್ಲಿ ಒಟ್ಟು 18.33 ಲಕ್ಷ ಕಂದಾಯ ವಸೂಲಿ ಮಾಡಿದ್ದು, ರೂ: 38.74 ಲಕ್ಷದಷ್ಟು ಬಾಕಿ ಇದ್ದು, ಅದನ್ನು ಸಂಗ್ರಹಿಸಲು ಕ್ರಮಕೈಗೊಳ್ಳುತ್ತಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಕೋವಿಡ್‌ನಿಂದಾಗಿ ಮರಣ ಹೊಂದಿದ ಸಂಬಂಧಿಕರಿಗೆ ನೀಡಿರುವ ಪರಿಹಾರ ಮೊತ್ತದ ವಿವರವನ್ನು ನೀಡಲು ಅಧಿಕಾರಿಗಳಿಗೆ ಸೂಚಿಸಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿ ಮರಣ ಹೊಂದಿದ 08 ಮಂದಿಗೆ ಪರಿಹಾರ ನೀಡಲು ಕ್ರಮಕೈಗೊಳ್ಳಲಾಗಿದೆ ಎಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ತಿಳಿಸಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್‌ಗಳು ಹಾಳಾಗಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಹಾಗೂ ಅಂರ್ಜಾಲ ಕೇಬಲ್ ಅಳವಡಿಸಲು ಅನುಮತಿಗಾಗಿ ಪತ್ರ ಬರೆದಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ 25 ವರ್ಷಗಳಷ್ಟು ಹಳೆಯದಾದ ಕೇಬಲ್‌ಗಳನ್ನು ಬದಲಾವಣೆ ಮಾಡುತ್ತಿದ್ದು, ಶೇ 50% ರಷ್ಟು ಕೆಲಸ ಮುಗಿದಿರುತ್ತದೆ. ಉಳಿಕೆ ಶೇ 50% ರಷ್ಟು ಕೇಬಲ್ ಬದಲಾವಣೆ ಕಾಮಗಾರಿಯ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಮುಂದುವರೆದು ಅಧ್ಯಕ್ಷರು ಸಾರ್ವಜನಿಕರ ಕಟ್ಟಡಗಳ ಬಾಕಿ ಇರುವ ಬಿಲ್ಲಿವ ವಿವರವನ್ನು ನೀಡಲು ಸಭೆಯಲ್ಲಿ ಹಾಜರಿದ್ದ ಶ್ರೀ ಮುನಿರಾಜು ಬೆಸ್ಕಾಂ ಅಧಿಕಾರಿ ರವರಿಗೆ ತಿಳಿಸಿರುತ್ತಾರೆ.
5. ವಾರ್ಡ್ ವ್ಯಾಪ್ತಿಯಲ್ಲಿನ ಶಾಲಾ-ಕಾಲೇಜುಗಳಿಗೆ National Building Code-2016 (National School Safety Programme (NSSP)) ರಂತೆ ಶಾಲಾ-ಕಾಲೇಜುಗಳಲ್ಲಿ ಮೂಲ ಸೌಕರ್ಯಗಳಾದ ಬೆಂಕಿ ನಂದಿಸುವಿಕೆ, ಅಂಗವಿಕಲರಿಗೆ ಅನುಕೂಲವಾಗುವಂತೆ ರ್‍ಯಾಂಪ್ ಅಳವಡಿಕೆ, ಸೂಕ್ತ ಶೌಚಾಲಯಗಳ ನಿರ್ಮಾಣ, ಗಾಳಿ ಬೆಳಕಿನ ವ್ಯವಸ್ಥೆ ಅಳವಡಿಸಿರುವ ಬಗ್ಗೆ ವರದಿ ನೀಡಲು ಕೋರಿ ಪತ್ರ ಬರೆಯುವಂತೆ ಅಧ್ಯಕ್ಷರು ತಿಳಿಸಿರುತ್ತಾರೆ. ಹಾಗೂ ಆಪತ್ ಮಿತ್ರ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿರುತ್ತಾರೆ.

2022-23ರಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳನ್ನು ಬಜೆಟ್‌ನಲ್ಲಿ ಅಳವಡಿಸಲು ಮಾನ್ಯ ಶಾಸಕರೊಂದಿಗೆ ಚರ್ಚಿಸಿದ್ದು, ಪ್ರಸ್ತಾವನೆಯನ್ನು ಸಿದ್ದಪಡಿಸಲಾಗುತ್ತದೆ ಎಂದು ಅಧ್ಯಕ್ಷರು ತಿಳಿಸಿರುತ್ತಾರೆ. ಫೆಬ್ರವರಿ ತಿಂಗಳಿನಲ್ಲಿ ವಾರ್ಡ್ ವ್ಯಾಪ್ತಿಯ ಎಲ್ಲಾ ರಸ್ತೆಗಳನ್ನು ಗುಂಡಿಮುಕ್ತ ಮಾಡುವ ಬಗ್ಗೆ ಶಾಸಕರೊಂದಿಗೆ ಪರಿವೀಕ್ಷಣೆ ಮಾಡಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳನ್ನು ಗುಂಡಿರಹಿತವಾಗಿ ಮತ್ತು ವಾಹನ ಸಂಚಾರಕ್ಕೆ ಯಾವುದೇ ತೊಂದರೆಯಾಗದಂತೆ ರಸ್ತೆಗಳನ್ನು ಸಜ್ಜುಗೊಳಿಸಲಾಗಿದೆ ಎಂದು ವಾರ್ಡ್ ಅಭಿಯಂತರರು ಸಭೆಗೆ ತಿಳಿಸಿರುತ್ತಾರೆ. ಇದನ್ನು ಅನುಮೋದಿಸಿದ ನೋಡಲ್ ಅಧಿಕಾರಿಗಳು ಇನ್ನು ಮುಂದೆ ಅಪಘಾತಗಳಿಗೆ ಎಡೆಮಾಡಿಕೊಡದಂತೆ ರಸ್ತೆಗಳಲ್ಲಿ ಉಂಟಾಗುವ ರಸ್ತೆಗುಂಡಿಗಳನ್ನು ತಕ್ಷಣವೇ ಮುಚ್ಚಲು ಕ್ರಮಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.